**Bangalore**
**Regional News**
**08.10.2025: 14.30hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಅರಣ್ಯ ಉಳಿದರೆ ಮಾತ್ರ ಭೂಮಿ ಉಳಿಯಲು ಸಾಧ್ಯ - ವನ್ಯಜೀವಿ ಸಪ್ತಾಹ ಸಮಾರೋಪದಲ್ಲಿ ಮುಖ್ಯಮಂತ್ರಿ ಅಭಿಮತ
2. ಕರ್ನಾಟಕ ರಾಜ್ಯ ಕೌಶಲ್ಯ ಅಭಿವೃದ್ಧಿ ನೀತಿ - ೨೦೨೫-೩೨ಕ್ಕೆ ಸರ್ಕಾರ ಅನುಮೋದನೆ
3. ಬೆಂಗಳೂರಿನ ಲಾಲ್‌ಬಾಗ್ ಉಳಿವಿಗೆ ಸರ್ಕಾರ ಬದ್ಧ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
4. ನಾಳೆ ಇತಿಹಾಸ ಪ್ರಸಿದ್ಧ ಹಾಸನಾಂಬ ಉತ್ಸವ; ಶುಕ್ರವಾರದಿಂದ ಸಾರ್ವಜನಿಕರಿಗೆ ದರ್ಶನಕ್ಕೆ ಅವಕಾಶ

**********

ಪ್ರಾಣಿ ಸಂಪತ್ತು ಇಲ್ಲದೆ ಅರಣ್ಯ ಸಂಪತ್ತಿಗೆ ಮೌಲ್ಯವೇ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ನಡೆದ ೭೧ನೇ ವನ್ಯಜೀವಿ ಸಪ್ತಾಹದ ಸಮಾರೋಪ ಸಮಾರಂಭದಲ್ಲಿ ಪರಿಸರ, ಅರಣ್ಯ ಸಂರಕ್ಷಕರಿಗೆ ಮುಖ್ಯಮಂತ್ರಿ ಪದಕ ವಿತರಿಸಿ ಮಾತನಾಡಿದ ಅವರು ಪ್ರಾಣಿ ಸಂಪತ್ತನ್ನು ನಾಶ ಮಾಡುವವರ ವಿರುದ್ಧ ಕಠಿಣ ಕ್ರಮದ ಎಚ್ಚರಿಕೆ ನೀಡಿದ್ದಾರೆ. ಹಸುವನ್ನು ತಿಂದಿದೆ ಎನ್ನುವ ಕಾರಣಕ್ಕೆ ಹುಲಿಗಳಿಗೆ ವಿಷ ಹಾಕುವುದನ್ನು ಸಹಿಸಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ಮಾನವ-ವನ್ಯಜೀವಿ ಸಹಬಾಳ್ವೆಯ ಪರಿಸರ ಪೂರಕವಾದ ಆಶಯ ಮತ್ತು ಉದ್ದೇಶಕ್ಕಾಗಿ ವನ್ಯಜೀವಿ ಸಪ್ತಾಹವನ್ನು ಆಚರಿಸಲಾಗುತ್ತಿದ್ದು, ಅರಣ್ಯದ ಉಳಿವು ಭೂಮಿಯ ಉಳಿವು ಎನ್ನುವುದನ್ನು ಮರೆಯಬಾರದು ಎಂದು ಹೇಳಿದ್ದಾರೆ. ಆನೆ ಮತ್ತು ಹುಲಿ ಸಂಪತ್ತಿನಲ್ಲಿ ರಾಜ್ಯ ಮೊದಲ ಮತ್ತು ಎರಡನೇ ಸ್ಥಾನದಲ್ಲಿದೆ. ಇದರ ಜೊತೆಗೆ ಪ್ರಾಣಿ ಮತ್ತು ಮನುಷ್ಯರ ಸಂಘರ್ಷ ತಪ್ಪಿ ಸಹಬಾಳ್ವೆ ಏರ್ಪಡಬೇಕು ಎಂದು ತಿಳಿಸಿದ್ದಾರೆ. ಪ್ರಾಣಿಗಳು ಕಾಡು ಬಿಟ್ಟು ಹೊರಗೆ ಏಕೆ ಬರುತ್ತಿವೆ ಎನ್ನುವ ಬಗ್ಗೆ ಅಧ್ಯಯನಗಳು ನಡೆದು ವೈಜ್ಞಾನಿಕ ಪರಿಹಾರಗಳನ್ನು ಕಂಡುಕೊಳ್ಳಬೇಕಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ದಿನೇ ದಿನೇ ಅರಣ್ಯ ಪ್ರದೇಶ ಕಡಿಮೆ ಆಗುತ್ತಿದ್ದರೆ ಮನುಷ್ಯ ಕುಲ ಉಳಿಯಲು ಸಾಧ್ಯವಿಲ್ಲ. ಆದ್ದರಿಂದ ಅರಣ್ಯದ ಉಳಿವು ಮನುಷ್ಯನ ಉಳಿವು ಎನ್ನುವುದನ್ನು ಪ್ರತಿಯೊಬ್ಬರೂ ಅರ್ಥ ಮಾಡಿಕೊಳ್ಳಬೇಕು ಎಂದು ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಅರಣ್ಯ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ, ಅರಣ್ಯ ರಾಯಭಾರಿ ಅನಿಲ್ ಕುಂಬ್ಳೆ, ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

**********

ರಾಜ್ಯ ಸರ್ಕಾರವು ಕರ್ನಾಟಕ ರಾಜ್ಯ ಕೌಶಲ್ಯ ಅಭಿವೃದ್ಧಿ ನೀತಿ ೨೦೨೫-೨೦೩೨ ಅನ್ನು ಅನುಮೋದಿಸಿದೆ. ಇದು ನಿಪುಣ ದೃಷ್ಟಿಕೋನಕ್ಕೆ ಹೊಂದಿಕೊಂಡಂತೆ ಯಾವುದೇ ರಾಜ್ಯದ ಅತಿದೊಡ್ಡ ಕೌಶಲ್ಯ, ಉನ್ನತೀಕರಣ ಮತ್ತು ಮರು ಕೌಶಲ್ಯ ಉಪಕ್ರಮವಾಗಿದೆ ಎಂದು ಮಾಹಿತಿ ಮತ್ತು ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಏಳು ವರ್ಷಗಳ ಮಾರ್ಗಸೂಚಿ ಮತ್ತು ೪ ಸಾವಿರದ ೪೩೨.೫ ಕೋಟಿ ವೆಚ್ಚದೊಂದಿಗೆ ಈ ನೀತಿಯು ರಾಜ್ಯವನ್ನು ಕೌಶಲ್ಯಪೂರ್ಣ ಕಾರ್ಯಪಡೆಯ ಪ್ರಮುಖ ಕೇಂದ್ರವನ್ನಾಗಿ ಮಾಡಲಿದೆ. ೨೦೩೨ರ ವೇಳೆಗೆ

ರಾಜ್ಯದ ಒಂದು ಟ್ರಿಲಿಯನ್ ಆರ್ಥಿಕ ಗುರಿಯನ್ನು ಸಾಧಿಸುವ ಗುರಿ ಹೊಂದಿದೆ ಎಂದು ಹೇಳಿದ್ದಾರೆ. ರಾಜ್ಯವು ಭಾರತದ ತಂತ್ರಜ್ಞಾನ ಮತ್ತು ಹೂಡಿಕೆ ರಾಜಧಾನಿ ಮಾತ್ರವಲ್ಲ, ಕೌಶಲ್ಯ ಮತ್ತು ಜ್ಞಾನ ರಾಜಧಾನಿಯೂ ಆಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

**********

ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿಗಳ ಮೇಲೆ ಅನುಚಿತ ವರ್ತನೆ ಅಕ್ಷಮ್ಯ ಅಪರಾಧ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳುವಂತೆ ಒತ್ತಾಯಿಸಿದ್ದಾರೆ. ಇದೇ ವೇಳೆ ಬೆಂಗಳೂರಿನ ಅಭಿವೃದ್ಧಿ ಹಿನ್ನೆಲೆಯಲ್ಲಿ ಸುರಂಗ ಮಾರ್ಗ ಮಾಡಲಾಗುತ್ತಿದ್ದು, ಲಾಲ್‌ಬಾಗ್ ವಿರೂಪಗೊಳ್ಳುವುದಿಲ್ಲ ಎಂದು ಹೇಳಿದ್ದಾರೆ. ಲಾಲ್‌ಬಾಗ್ ಎಷ್ಟು ಪವಿತ್ರ ಎಂದು ತಮಗೆ ತಿಳಿದಿದ್ದು, ಅಧಿಕಾರಿಗಳ ಜೊತೆ ಶೀಘ್ರವೇ ವೀಕ್ಷಣೆ ಮಾಡುವುದಾಗಿ ಸ್ಪಷ್ಟಪಡಿಸಿದ್ದಾರೆ. ಸಂಪುಟ ವಿಸ್ತರಣೆ ಕುರಿತಂತೆ ಪ್ರತಿಕ್ರಿಯಿಸಲು ಡಿ.ಕೆ. ಶಿವಕುಮಾರ್ ನಿರಾಕರಿಸಿದ್ದಾರೆ.

**********

ಇತಿಹಾಸ ಪ್ರಸಿದ್ಧ ಹಾಸನದ ಹಾಸನಾಂಬ ಹಾಗೂ ಸಿದ್ದೇಶ್ವರ ದೇವಾಲಯ ಬಾಗಿಲು ನಾಳೆ ತೆರೆಯಲಿದೆ. ಸಾರ್ವಜನಿಕರಿಗೆ ಇದೇ ಶುಕ್ರವಾರದಿಂದ ದೇವರ ದರ್ಶನಕ್ಕೆ ಜಿಲ್ಲಾಡಳಿತ ಅವಕಾಶ ಕಲ್ಪಿಸಿದೆ. ವರ್ಷಕ್ಕೆ ಒಮ್ಮೆ ಮಾತ್ರ ಬಾಗಿಲು ತೆಗೆದು ದರ್ಶನ ನೀಡುವ ಹಾಸನಾಂಬೆಯನ್ನು ಕಣ್ತುಂಬಿಕೊಳ್ಳಲು ಭಕ್ತರು ಕಾತರರಾಗಿದ್ದಾರೆ. ಈ ಬಾರಿ ಇದೇ ೨೨ರ ತನಕ ದರ್ಶನಕ್ಕೆ ಅವಕಾಶ ಇರುವುದರಿಂದ ೨೨ ಲಕ್ಷಕ್ಕೂ ಅಧಿಕ ಭಕ್ತರು ಆಗಮಿಸುವ ಅಂದಾಜು ಮಾಡಲಾಗಿದೆ. ಭಕ್ತರಿಗೆ ಉಚಿತ ಪ್ರಸಾದ ವ್ಯವಸ್ಥೆ ಮಾಡಲು ಜಿಲ್ಲಾಡಳಿತ ನಿರ್ಧರಿಸಿದೆ. ೮೦ ವರ್ಷಕ್ಕಿಂತ ಮೇಲ್ಪಟ್ಟವರಿಗೆ ಹಾಗೂ ವಿಶೇಷಚೇತನರಿಗೆ ನೇರ ದರ್ಶನ ವ್ಯವಸ್ಥೆ ಕಲ್ಪಿಸಲಾಗಿದೆ. ಇದೇ ಮೊದಲ ಬಾರಿಗೆ ವಿವಿಐಪಿ ಪಾಸ್ ರದ್ದು ಮಾಡಲಾಗಿದೆ. ಪ್ರತಿ ಗಂಟೆಗೆ ೮ ಸಾವಿರ ಭಕ್ತರಂತೆ ಪ್ರತಿ ದಿನ ೮೦ ರಿಂದ ಒಂದು ಲಕ್ಷಕ್ಕೂ ಹೆಚ್ಚು ಭಕ್ತರು ದೇವಿಯ ದರ್ಶನ ಪಡೆಯಲು ಅನುಕೂಲವಾಗುವಂತೆ ವ್ಯವಸ್ಥೆ ಮಾಡಲಾಗಿದೆ. ಬೆಂಗಳೂರಿನಿಂದ ಹಾಸನಕ್ಕೆ ಕೆಎಸ್‌ಆರ್‌ಟಿಸಿಯಿಂದ ವಿಶೇಷ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ.

**********

ದಕ್ಷಿಣ ಕನ್ನಡ ಸಂಸದ ಕಾಪ್ಟನ್ ಬ್ರಿಜೇಶ್ ಚೌಟ ನ್ಯೂಯಾರ್ಕ್‌ನಲ್ಲಿ ನಡೆಯುತ್ತಿರುವ ವಿಶ್ವಸಂಸ್ಥೆಯ ೮೦ನೇ ಸಾಮಾನ್ಯ ಸಭೆಯ ಅಧಿವೇಶನದಲ್ಲಿ ಭಾಗವಹಿಸಲು ಬಿಜೆಪಿ ಸಂಸದ ಪಿ.ಪಿ ಚೌಧರಿ ನೇತೃತ್ವದ ನಿಯೋಗದೊಂದಿಗೆ ತೆರಳಿದ್ದಾರೆ. ಭಾರತದಿಂದ ವಿವಿಧ ಪಕ್ಷಗಳ ಸಂಸದರನ್ನು ಒಳಗೊಂಡಿರುವ ಎರಡು ನಿಯೋಗವು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಈ ಅಧಿವೇಶನದಲ್ಲಿ ಭಾಗವಹಿಸಲಿದೆ. ಆ ಪೈಕಿ ಪಿ.ಪಿ ಚೌಧರಿ ನೇತೃತ್ವದ ಮೊದಲ ನಿಯೋಗವು ಇಂದಿನಿಂದ ೧೪ರವರೆಗೆ ನಡೆಯುವ ಅಧಿವೇಶನದಲ್ಲಿ ಪಾಲ್ಗೊಳ್ಳಲಿದ್ದು, ಈ ತಂಡದಲ್ಲಿ ಕರ್ನಾಟಕದಿಂದ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಸ್ಥಾನ ಪಡೆದಿದ್ದಾರೆ.

**********

ರಾಷ್ಟ್ರೀಯ ಸಂಪತ್ತಾಗಿರುವ ಯುವ ಸಂಪನ್ಮೂಲವನ್ನು ಸಂರಕ್ಷಣೆ ಮಾಡುವ ನಿಟ್ಟಿನಲ್ಲಿ ಮದ್ಯ ಹಾಗೂ ಮಾದಕ ವಸ್ತುಗಳಿಂದ ದೂರವಿರುವಂತೆ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷ ಶರಣಪ್ಪ ಸಲಾದಪುರ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ವ್ಯಸನ ಮುಕ್ತ ಸಮಾಜ ನಿರ್ಮಾಣವು ಎಲ್ಲರ ಜವಾಬ್ದಾರಿಯಾಗಿದೆ. ಕಳ್ಳಸಾಗಣೆ ಮೂಲಕ ಮಾದಕ ವಸ್ತುಗಳ ಮಾರಾಟ ಮಾಡುವ ಜಾಲವನ್ನು ಬೇರು ಸಮೇತ ಕಿತ್ತೆಸೆಯಬೇಕು ಎಂದು ಕರೆ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಎಲ್ಲಾ ಜಿಲ್ಲೆಗಳಿಗೂ ಭೇಟಿ ನೀಡಿ ಜಿಲ್ಲಾಡಳಿತದ ಸಹಕಾರದೊಂದಿಗೆ ಸಂಬಂಧಿಸಿದ ಇಲಾಖೆ ಮುಖ್ಯಸ್ಥರ ಜೊತೆಗೆ ಸಭೆ ನಡೆಸುವ ಮೂಲಕ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ.

**********

ದೇಶದಲ್ಲಿ ಸ್ವದೇಶಿ ಉತ್ಪನ್ನಗಳ ಬಳಕೆ ಹೆಚ್ಚಾಗಬೇಕಿದೆ ಎಂದು ಮಾಜಿ ಸಚಿವ ರಾಜೂಗೌಡ ಅಭಿಪ್ರಾಯಪಟ್ಟಿದ್ದಾರೆ. ಯಾದಗಿರಿ ಜಿಲ್ಲೆಯ ಸುರಪುರ ನಗರದಲ್ಲಿ ಹಮ್ಮಿಕೊಂಡಿದ್ದ ಆತ್ಮ ನಿರ್ಭರ ಭಾರತ ಮತ್ತು ಜಿಎಸ್ಟಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ಸ್ವದೇಶಿ ಸಂಕಲ್ಪದ ಆತ್ಮ ನಿರ್ಭರ ಭಾರತ ಅಭಿಯಾನದ ಕುರಿತು ಪ್ರತಿಯೊಬ್ಬರು ಜನಜಾಗೃತಿ ಮೂಡಿಸಬೇಕು ಎಂದು ತಿಳಿಸಿದ್ದಾರೆ.

**********

ರಾಷ್ಟ್ರೀಯ ಪೋಷಣ್ ಅಭಿಯಾನವು ಅಪೌಷ್ಠಿಕತೆ ನಿವಾರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಕುಮಟಾ-ಹೊನ್ನಾವರ ಕ್ಷೇತ್ರದ ಶಾಸಕ ದಿನಕರ ಶೆಟ್ಟಿ ತಿಳಿಸಿದ್ದಾರೆ. ಕುಮಟಾದ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ನಡೆದ ರಾಷ್ಟ್ರೀಯ ಪೋಷಣ್ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗರ್ಭೀಣಿಯರು ಮತ್ತು ಬಾಣಂತಿಯರು ಪೌಷ್ಠಿಕ ಆಹಾರ ಸೇವಿಸಿ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ.

**********

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ರಾಜ್ಯದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಮಾಹಿತಿ ಸಂಗ್ರಹಿಸಲು ನಡೆಸಲಾಗುತ್ತಿರುವ ಸಮೀಕ್ಷೆ ಕಾರ್ಯದಲ್ಲಿ, ಉತ್ತರಕನ್ನಡ ಜಿಲ್ಲೆಯಲ್ಲಿ ಇವರೆಗೆ ೨ ಲಕ್ಷದ ೯೭ ಸಾವಿರದ ೩೪೭ ಮನೆಗಳ ಸಮೀಕ್ಷೆಯನ್ನು ಪೂರ್ಣಗೊಳಿಸಲಾಗಿದೆ. ಸಮೀಕ್ಷೆ ಕಾರ್ಯದಲ್ಲಿ ಜಿಲ್ಲೆಯಲ್ಲಿ ಇದುವರೆಗೂ ಶೇಕಡ ೮೮.೯೮ರಷ್ಟು ಸಾಧನೆ ಮಾಡಲಾಗಿದೆ ಎಂದು ಜಿಲ್ಲಾಡಳಿತದ ಪ್ರಕಟಣೆಯಲ್ಲಿ ತಿಳಿಸಿದೆ.

*****END*****